ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 6/3/2021

# ಸಚಿವರ ಗೈರಿಗೆ ಸಭಾಪತಿ ಅತೃಪ್ತಿ

2ನೇ ದಿನವೂ ಸಚಿವರಿಲ್ಲದೆ ಪ್ರಶ್ನೋತ್ತರ

ವಿಪಕ್ಷ ನಾಯಕ ಸೇರಿ ಹಲವರ ಆಕ್ಷೇಪ

ವಿಧಾನ ಪರಿಷತ್ತು: ಪ್ರಶ್ನೋತ್ತರ ಕಲಾಪದ ವೇಳೆ ಉತ್ತರ ನೀಡಬೇಕಾದ ಸಚಿವರು ಗೈರಾಗಿದ್ದನ್ನು ಕಂಡು ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ ವ್ಯಕ್ತಪಡಿಸಿದರು.

ಸದನದಲ್ಲಿ ಪ್ರಶ್ನೋತ್ತರ ಕಲಾಪದ ವೇಳೆ ಸಂಬಂಧಿಸಿದ ಸಚಿವರು ಹಾಜರಿರಬೇಕು ಎಂದು ಸೂಚನೆ ನೀಡಿದ್ದೇನೆ. ಹೀಗಿದ್ದರೂ 1.15ಕ್ಕೆ ಸಂಬಂಧಿಸಿದ ಸಚಿವರನ್ನು ಕರೆಸಿಲ್ಲ. ಓರ್ವ ಸಚಿವರು ನನಗೆ ಪತ್ರ ಬರೆದು ಪೂರ್ವ ನಿಯೋಜಿತ ಕಾರ್ಯಕ್ರಮ ಇರುವುದರಿಂದ ಸದನಕ್ಕೆ ಬರಲಾಗುವುದಿಲ್ಲ ಎಂದಿದ್ದಾರೆ. ಆದರೆ, ಮುಂದಿನ ಬಾರಿ ಹೀಗೆ ಮಾಡುವಂತಿಲ್ಲ. ಸದನದಲ್ಲಿ ಪ್ರಶ್ನೋತ್ತರ ಕಲಾಪ ಇರುವಾಗ ಸಂಬಂಧಿಸಿದ ಸಚಿವರೇ ಉತ್ತರ ನೀಡಬೇಕು. ಇದಕ್ಕೆ ಸಭಾನಾಯಕರು ಹಾಗೂ ಸಚೇತಕರು ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸದನ ಆರಂಭವಾಗಿ ಪ್ರಶ್ನೋತ್ತರ ಕಲಾಪ ಶುರುವಾದಾಗ



ಪ್ರತಿಪಕ್ಷದ ನಾಯಕ ಎಸ್.ಆರ್. ಪಾಟೀಲ್ ಸಚಿವರ ಗೈರು ಹಾಜರಿಗೆ ಆಕ್ರೋಶ ವ್ಯಕ್ತಪಡಿಸಿದರು.

ಉತ್ತರ ನೀಡಬೇಕಾದ ಗ್ರಾಮೀಣಾಭಿವೃದ್ಧಿ ಸಚಿವರು ಹಾಜರಾಗಿರಲಿಲ್ಲ. ಈ ಬಗ್ಗೆ ಪ್ರತಿಪಕ್ಷದ ನಾಯಕ ಎಸ್.ಆರ್. ಪಾಟೀಲ್ ಆಕ್ಷೇಪ ತೆಗೆದು ಸಚಿವರೇ ಇಲ್ಲವಾದ ಮೇಲೆ ಉತ್ತರ ಕೊಡೋದು ಯಾರು ಎಂದು ಪ್ರಶ್ನೆ ಮಾಡಿದ್ದಲ್ಲದೆ, ಯಾರಾಗಿ ಅಧಿವೇಶನ ಮಾಡಬೇಕು. ಅಧಿವೇಶನ ನಡೆಯುವಾಗ ಸಚಿವರು ಪೂರ್ವ ನಿಯೋಜಿತ ಕಾರ್ಯಕ್ರಮ ಹೇಗೆ ಹಾಕಿಕೊಳ್ಳುತ್ತಾರೆ. ಅಧಿವೇಶನ ಇದ್ದಾಗ ಎಲ್ಲ ಕಾರ್ಯಕ್ರಮಗಳನ್ನು ರದ್ದು ಮಾಡಬೇಕು. ಅಗತ್ಯ ಹಾಗೂ ಜ್ವಲಂತ ಸಮಸ್ಯೆಗಳು ಎದುರಾದಾಗ ಹೋಗಬೇಕಾಗುತ್ತದೆ. ಮದುವೆಗಳಿಗೆಲ್ಲ ಪೂರ್ವ ನಿಯೋಜಿತ ಕಾರ್ಯಕ್ರಮ ಎಂದು ಹೇಳಬಾರದು. ಅನಗತ್ಯವಾಗಿ ಗೈರಾಗಿ ಸದನಕ್ಕೆ ಅಗೌರವ ತೋರುತ್ತಿದ್ದಾರೆ. ನಿನ್ನೆ ತಾನೇ ತಾವು ಮುಖ್ಯಮಂತ್ರಿಗಳಿಗಾಗಲೀ ಸಂಬಂಧಿಸಿದ ಸಚಿವರು ಸದನದಲ್ಲಿ ಹಾಜರಿರಬೇಕು ಎಂದು ನೀಡಿದ ಆದೇಶಕ್ಕೆ ಕಿಮ್ಮತ್ತಿಲ್ಲವೇ. ಯಾವ ಪುರುಷಾರ್ಥಕ್ಕೆ ಸದನ ನಡೆಯಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದಾಗ ಸಭಾಪತಿ ಬಸವರಾಜ ಹೊರಟ್ಟಿ ಮಧ್ಯಪ್ರವೇಶಿಸಿ ಸಚಿವರು ಹಾಜರಿರುವಂತೆ ಅವರಿಗೆ ಪತ್ರಕ್ಕೆ ತಾಕೀತು ಮಾಡಿದರು.

# ಹಳೆ ಪಿಂಚಣಿ ಪದ್ಧತಿ ಅನುಷ್ಠಾನಕ್ಕೆ ಒಲವು

ವಿಧಾನಪರಿಷತ್ತು: 2006ರ ಬಳಿಕ ಸರ್ಕಾರಿ ಸೇವೆಗೆ ಸೇರ್ಪಡೆಯಾಗಿರುವವರಿಗೆ ಈ ಹಿಂದಿನ ಪಿಂಚಣಿ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಸಮಿತಿ ರಚನೆಯಾಗಿದ್ದು ವರದಿ ಪಡೆದು ಚರ್ಚಿಸಿದ ನಂತರ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದರು. ನಿಯಮ 330ರಡಿ ಜೆಡಿಎಸ್ ಸದಸ್ಯ ಶ್ರೀಕಂಠೇಗೌಡ ಅವರ ಪ್ರಸ್ತಾಪಕ್ಕೆ ಉತ್ತರಿಸಿದ ಸಚಿವರು, ಸರ್ಕಾರಕ್ಕೆ ಆರ್ಥಿಕ ಹೊರೆ ತಪ್ಪಿಸಲೆಂದೇ ಕಾರಣಕ್ಕೆ ಅಂದಿನ ಕೇಂದ್ರ ಸರ್ಕಾರದ ಸೂಚನೆಯಂತೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಅದರಿಂದ ಈ ಯೋಜನೆಗೆ ವ್ಯಾಪಕ ವಿರೋಧ ವ್ಯಕ್ತವಾಗುವ ಹಿನ್ನೆಲೆಯಲ್ಲಿ ಸರ್ಕಾರಿ ನೌಕರರ ಒತ್ತಾಯದ ಮೇರೆಗೆ ಈ ಹಿಂದಿನ ಪಿಂಚಣಿ ಯೋಜನೆಯನ್ನೇ ಮರುಜಾರಿಗೊಳಿಸುವ ಕುರಿತ ಸಾಧ್ಯಾಸಾಧ್ಯತೆಗಳನ್ನು ಪರಿಶೀಲಿಸಲು 2018ರಲ್ಲಿ ಅಂದಿನ ಸರ್ಕಾರ ಸಮಿತಿಯೊಂದನ್ನು ರಚಿಸಿತ್ತು. ಈ ಸಮಿತಿಯ ವರದಿ ಇನ್ನೂ ಸರ್ಕಾರದ ಕೈ ಸೇರಿಲ್ಲ. ಶೀಘ್ರದಲ್ಲೇ ವರದಿ ಪಡೆದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸಭೆ ಕರೆದು ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸದನಕ್ಕೆ ಭರವಸೆ ನೀಡಿದರು. ಇದಕ್ಕೂ ಮುನ್ನ ಈ ವಿಷಯ ಕುರಿತು ಸದನದಲ್ಲಿ ವಿಸ್ತೃತ ಚರ್ಚೆ ನಡೆಯಿತು. ಕೆ.ಟಿ. ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ವಿಪಕ್ಷ ನಾಯಕ ಎಸ್.ಆರ್.ಪಾಟೀಲ್, ಬಿಜೆಪಿ ಸದಸ್ಯ ಅಯನೂರು ಮಂಜುನಾಥ್, ವೈ.ಎ.ನಾರಾಯಣಸ್ವಾಮಿ, ಭೋಜೇಗೌಡ, ಚಿದಾನಂದ ಎಂ.ಗೌಡ, ಅ ದೇವೇಗೌಡ ಸೇರಿದಂತೆ ಹಲವು ಸದಸ್ಯರು ಹೊಸ ಪಿಂಚಣಿ ಯೋಜನೆ ಜಾರಿಗೊಳಿಸುವ ಸಂದರ್ಭದಲ್ಲಿ ಹೇಳಲಾದ ಅನುಕೂಲಗಳೆಲ್ಲವೂ ಸುಳ್ಳೆಂಬುದು ಗೊತ್ತಾಗಿದೆ. ಈ ಯೋಜನೆಯಿಂದ ಯಾರಿಗೂ ಅನುಕೂಲವಾಗುತ್ತಿಲ್ಲ. 30 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾಗುವವರು ಮರು ತಿಂಗಳಿನಿಂದಲೇ ಬರಿಗೈಯಾಗುವುದು ಸಂಕಟಮಯವೆನಿಸುತ್ತಿದೆ ಎಂದರು.

# ನೆರವಿಗೆ ಬಂದ ಕಾರಜೋಳ

ವಿಧಾನಪರಿಷತ್ತು: ತೋಟಗಾರಿಕೆ ಸಚಿವ ಆರ್. ಶಂಕರ್ ಅವರು ಸದಸ್ಯರ ಪ್ರಶ್ನೆಗೆ ಉತ್ತರ ನೀಡಲು ತಡಬಡಾಯಿಸಿದಾಗ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರ ನೆರವಿಗೆ ಬಂದ ಪ್ರಸಂಗ ನಡೆಯಿತು.

ಬಿಜೆಪಿ ಸದಸ್ಯ ಎನ್. ರವಿಕುಮಾರ್ ಅವರು ರೇಷ್ಮೆ ಇಲಾಖೆಗೆ ಸಂಬಂಧಿಸಿದಂತೆ ಪ್ರಶ್ನೆ ಕೇಳಿ ಕೇಂದ್ರದಿಂದ ಬಂದ ಹಣವನ್ನು ಬಳಕೆ ಮಾಡಿಕೊಳ್ಳದೆ ಬಳಸಿಕೊಳ್ಳಲಾಗಿದೆ ಎಂದು ಕೇಂದ್ರಕ್ಕೆ ತಪ್ಪು ಮಾಹಿತಿ ರವಾನಿಸಲಾಗಿದೆ. ಇದು ಎಷ್ಟು ಸರಿ ಎಂದು ಪ್ರಶ್ನೆ ಮಾಡಿದಾಗ ಸಚಿವರು ಉತ್ತರ ನೀಡಲು ತಡಬಡಾಯಿಸಿದರು. ಈ ವೇಳೆ ಕಾರಜೋಳ ಅವರು ಮಾತನಾಡಿ, ಕೇಂದ್ರದಿಂದ ಬಂದ ಹಣ ಲ್ಯಾಪ್ಸ್ ಆಗಬಾರದು ಎಂಬ ಕಾರಣಕ್ಕೆ ಆ ಹಣವನ್ನು ಬ್ಯಾಂಕ್ ಖಾತೆಯಲ್ಲಿಡಲಾಗುತ್ತದೆ. ಕೊರೊನಾ ಸೋಂಕಿನ ಹಿನ್ನೆಲೆಯಲ್ಲಿ ಹಣ ಬಳಕೆ ಮಾಡಿಕೊಳ್ಳಲಾಗಿಲ್ಲ. ಇದು ಬಳಕೆ ಮಾಡಿಕೊಳ್ಳದಿದ್ದರೆ ಕೇಂದ್ರಕ್ಕೆ ವಾಪಸ್ ಹೋಗುತ್ತದೆ. ಆದರೆ, ಕೇಂದ್ರದ ಹಣವನ್ನು ಬಳಕೆ ಮಾಡಿಕೊಳ್ಳಲು ಎಲ್ಲ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಸಾಫ್ಟ್‌ವೇರ್ ಅಳವಡಿಕೆ ಸೇರಿದಂತೆ ಎಲ್ಲ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಈ ಹಣ ದುರುಪಯೋಗವಾಗಲಿ ಅಥವಾ ಕೇಂದ್ರಕ್ಕೆ ವಾಪಸ್ ಆಗುವಂತಹ ಪ್ರಶ್ನೆ ಇಲ್ಲ. ಲ್ಯಾಪ್ಸ್ ಆಗಬಾರದು ಎಂಬ ಕಾರಣಕ್ಕೆ ಎಲ್ಲ ಕ್ರಮಗಳನ್ನು ತೆಗೆದುಕೊಂಡೇ ಕೇಂದ್ರಕ್ಕೆ ಮಾಹಿತಿ ನೀಡಲಾಗಿರುತ್ತದೆ ಎಂದರು.

